**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕೇಂದ್ರ ಪುರಸ್ಕೃತ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಪಿ.ಎಸ್.ಎ) ಯೋಜನೆಯಡಿಯ ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012(ಪಿ-3), ದಿನಾಂಕ: 29-07-2013
2. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವರ ಆದೇಶ ಸಂಖ್ಯೆ:ಕೆ-11011/44/2016-CB, ದಿನಾಂಕ:27-12-2016.
3. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 230 ವೆಚ್ಚ-6/2015, ದಿನಾಂಕ:25-03-2017.

**ಪ್ರಸ್ತಾವನೆ:**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS) ಹಾಗೂ ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಮತ್ತು ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ನೂತನ ಯೋಜನೆ, ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ.

ಮೇಲೆ ಓದಲಾದ ಉಲ್ಲೇಖ(1)ರಲ್ಲಿನ ಸರ್ಕಾರದ ಆದೇಶದಲ್ಲಿ ಈ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಈ ಆದೇಶದನ್ವಯ ಯೋಜನಾ ವೆಚ್ಚವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು 75:25ರ ಪ್ರಮಾಣದಲ್ಲಿ ಭರಿಸಬೇಕಾಗಿದೆ. ಮೇಲೆ ಓದಲಾದ ಉಲ್ಲೇಖ(2)ರ ಭಾರತ ಸರ್ಕಾರದ ಪತ್ರದಲ್ಲಿ 2016-17ನೇ ಸಾಲಿಗೆ ರಾಜ್ಯ ಸರ್ಕಾರಕ್ಕೆ ವಿವಿಧ ಚಟುವಟಿಕೆಗಳಿಗಾಗಿ ಕೇಂದ್ರ ಸರ್ಕಾರವು ತನ್ನ ಪಾಲಿನ ಸಂಪೂರ್ಣ ಅನುದಾನದ ಮೊತ್ತ ರೂ.1508.00 ಲಕ್ಷಗಳನ್ನು ನೇರವಾಗಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ಬಿಡುಗಡೆಗೊಳಿಸಿರುತ್ತದೆ.

ಮೇಲೆ ಓದಲಾದ (2)ರ ಭಾರತ ಸರ್ಕಾರದ ಆದೇಶದನ್ವಯ 2016-17ನೇ ಸಾಲಿಗೆ ಯೋಜನೆಯ ಒಟ್ಟಾರೆ ವೆಚ್ಚದ ಮೊತ್ತವು 5881.00 ಲಕ್ಷಗಳಾಗಿದ್ದು, ಇದು ಸಂಪೂರ್ಣ ಕೇಂದ್ರದ ಪಾಲಿನ ಅನುದಾನವಾಗಿರುತ್ತದೆ. ಈ ಅನುದಾನವು ಪ್ರಸ್ತುತ ಸಂಪೂರ್ಣ ಕೇಂದ್ರದ ಪಾಲಿನ ವಂತಿಗೆಯನ್ನು, ವರ್ಗೇತರ (NON-SC ಮತ್ತು ST) ಯೋಜನೆ, ವಿಶೇಷ ಘಟಕ (SC) ಯೋಜನೆ ಮತ್ತು ವಿಶೇಷ ಗಿರಿಜನ (ST) ಯೋಜನೆಗಳಿಗಾಗಿ 2015-16ನೇ ಸಾಲಿನ ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ ನೀಡಲು ನಿರ್ಧರಿಸಿ, ಅನುಕ್ರಮವಾಗಿ ರೂ.11,64,17,600/-, ರೂ.2,44,29,600/- ಮತ್ತು ರೂ.99,52,800/- ಒಟ್ಟಾರೆ ರೂ.15,08,00,000/-ಗಳನ್ನು ಬಿಡುಗಡೆಗೊಳಿಸಿರುತ್ತಾರೆ.

ಉಲ್ಲೇಖ(2)ರ ಭಾರತ ಸರ್ಕಾರದ ಪತ್ರದ ಮೂಲಕ ಕೇಂದ್ರ ಸರ್ಕಾರದಿಂದ ಈ ಯೋಜನೆಯ ಉದ್ದೇಶಕ್ಕಾಗಿ ಮೊದಲನೆಯ ಕಂತಿನ ಬಾಬ್ತಿನ ಮೊತ್ತ ರೂ.15,08,00,000/-ಗಳನ್ನು ಪಂಚಾಯತಿ ಸಶಕ್ತೀಕರಣ ಅಭಿಯಾನ್(ಪಿ.ಎಸ್.ಎ) ಯೋಜನೆ ಅನುದಾನವನ್ನು ನೇರವಾಗಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ಬಿಡುಗಡೆಗೊಳಿಸಿರುತ್ತದೆ. ಈ ಅನುದಾನಕ್ಕೆ ಸಮವರ್ತಿಯಾಗಿ ರಾಜ್ಯ ಸರ್ಕಾರದ ಪಾಲಿನ ಶೇಕಡಾ 25ರಷ್ಟರ ಮೊತ್ತವನ್ನು ಲೆಕ್ಕಶೀರ್ಷಿಕೆ 2515-00-101-0-31-059(ಯೋಜನೆ)ರಡಿ ಒದಗಿಸಲಾಗಿರುವ ರೂ.5.00 ಕೋಟಿಗಳನ್ನು ಮೇಲೆ ಓದಲಾದ(3)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಬಿಡುಗಡೆಗೊಳಿಸಲು ಸಹಮತಿಸಿರುತ್ತಾರೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 62 ಜಿಪಸ 2015, ಬೆಂಗಳೂರು, ದಿನಾಂಕ: 25-03-2017.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, "ಪಂಚಾಯತಿ ಸಶಕ್ತೀಕರಣ ಅಭಿಯಾನ್(ಪಿ.ಎಸ್.ಎ) ಯೋಜನೆ"ಯ ವಿವಿಧ ಚಟುವಟಿಕೆಗಳನ್ನು ಅನುಷ್ಠಾನಗೊಳಿಸಲು 2016-17ನೇ ಸಾಲಿನ ಲೆಕ್ಕಶೀರ್ಷಿಕೆ 2515-00-101-0-31(ಯೋಜನೆ)ರಡಿ ಒದಗಿಸಲಾಗಿರುವ ರೂ.500.00 ಲಕ್ಷಗಳಲ್ಲಿ ಕೇಂದ್ರದ ಪಾಲಿನ ಸಮವರ್ತಿಯಾಗಿ ರಾಜ್ಯದ ಪಾಲಿನ ಅನುದಾನ ರೂ.500.00 (ಐದು ನೂರ ಲಕ್ಷ ರೂಪಾಯಿಗಳು ಮಾತ್ರ)ಲಕ್ಷಗಳನ್ನು ಬಿಡುಗಡೆಗೊಳಿಸಲು ಆದೇಶಿಸಿದೆ. ಈ ಮೊತ್ತವನ್ನು ಸರ್ಕಾರದ ಅಧೀನ ಕಾರ್ಯದರ್ಶಿ(ಜಿಲ್ಲಾ

ಪಂಚಾಯತ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರು ರಾಜ್ಯ ಹುಜೂರ್ ಖಜಾನೆಯಿಂದ ಪೇಯಿಸ್ ರಸೀತಿಯ ಮೇಲೆ ಡ್ರಾ ಮಾಡಲು ಹಾಗೂ ಈ ಅನುದಾನದ ಮೊತ್ತವನ್ನು ರಾಜೀವ್‌ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ)ಯೋಜನೆಗಾಗಿ ತೆರೆಯಲಾಗಿರುವ ಬೆಂಗಳೂರಿನ ಇಂದಿರಾನಗರ ದೇನಾ ಬ್ಯಾಂಕ್ ಶಾಖೆಯ ಉಳಿತಾಯ ಖಾತೆ ಸಂಖ್ಯೆ 052110026480ಗೆ ಜಮೆ ಮಾಡಲು ಆದೇಶಿಸಿದೆ.

ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್.ಡಿ 03 ಟಿ.ಎಫ್.ಪಿ 2016 ದಿನಾಂಕ:02.04.2016 ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ:06:ಟಿಎಫ್‌ಪಿ:2016, ದಿನಾಂಕ:27-12-2016 ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 230 ವೆಚ್ಚ-6/2015, ದಿನಾಂಕ:25-03-2017ರ ಸಹಮತಿಯನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

28/3/2017
(ಪಿ.ದೇವಸಹಾಯರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

Under Secretary to Govt. (ZP)
Rural Devt. & Pan.Raj Dept
Karnataka Govt. Secretariat

ಗೆ,

1. ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು ಇವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
5. ವಿಶೇಷಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ವ್ಯವಸ್ಥಾಪಕರು, ದೇನಾ ಬ್ಯಾಂಕ್, ಇಂದಿರಾನಗರ ಶಾಖೆ, ಬೆಂಗಳೂರು.
8. ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ :

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.